# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 16.12.2019

## ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಮಾನ್ಯ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಿಂದ ಪರಿಶೀಲನಾ ಸಭೆ:





ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆಯಲ್ಲಿ ಮಾನ್ಯ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಾದ ಶ್ರೀ ಜಗದೀಶ್ ಹಿರೇಮನಿ ರವರು ಇಂದು ಪಾಲಿಕೆ ಜಂಟಿ ಆಯುಕ್ತರು ಹಾಗೂ ಹಿರಿಯ ಅಧಿಕಾರಿಗಳ ಜೊತೆ ಕೌನ್ಸಿಲ್ ಕಟ್ಟಡ ಸಭಾಂಗಣ-01ರಲ್ಲಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಆಡಳಿತ ಪಕ್ಷದ ನಾಯಕರಾದ ಶ್ರೀ ಮುನೀಂದ್ರ ಕುಮಾರ್, ವಿರೋಧ ಪಕ್ಷದ ನಾಯಕರಾದ ಶ್ರೀ ಅಬ್ದುಲ್ ವಾಜೀದ್, ಜೆಡಿಎಸ್ ಪಕ್ಷದ ನಾಯಕರಾದ ಶ್ರೀಮತಿ ನೇತ್ರಾ ನಾರಾಯಣ್, ಘನತ್ಯಾಜ್ಯ ವಿಭಾಗದ ಜಂಟಿ ಆಯಕ್ತರಾದ ಶ್ರೀ ಸರ್ಫರಾಜ್ ಖಾನ್, ಉಪ ಆಯುಕ್ತರು(ಆಡಳಿತ) ಶ್ರೀ ಲಿಂಗಮೂರ್ತಿ ಹಾಗೂ ವಿವಿಧ ಸಂಘಟನೆಗಳ ಪೌರಕಾರ್ಮಿಕರ ಸಂಘದ ಪ್ರತಿನಿಧಿಗಳು ಉಪಸ್ಥಿತರಿದ್ದರು.

ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳು, ಪೌರಕಾರ್ಮಿಕರು ಹಾಗೂ ಮ್ಯಾನುಯಲ್ ಸ್ಕ್ಯಾವೆಂಜರ್ಸ್‌ಗಳ ಸಮಸ್ಯೆ ಇತ್ಯರ್ಥ ಮಾಡುವ ಸಲುವಾಗಿ ಪ್ರತ್ಯೇಕ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆಯುಕ್ತರ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮಹಾಪೌರರು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿ ಹಾಗೂ ಪೌರಕಾರ್ಮಿಕರ ಸಮಸ್ಯೆಗಳು ಇತ್ಯರ್ಥವಾಗಬೇಕಾದರೆ ಮೊದಲು ನಿಮ್ಮ ಮಟ್ಟದಲ್ಲೇ ಸಭೆಗಳನ್ನು ಮಾಡಿಕೊಂಡು ಇರುವ ಸಮಸ್ಯೆಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಿ ಪಟ್ಟಿಮಾಡಿಕೊಂಡು ನಮಗೆ ತಿಳಿಸಿದರೆ ಆ ಸಮಸ್ಯೆಗಳನ್ನು ಬಗೆಹರಿಸಲು ಸೂಕ್ತ ಕ್ರಮವಹಿಸಲಾಗುವುದು ಎಂದರು.

ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ಮಟ್ಟದಲ್ಲಿ ಸಭೆ ನಡೆಸಿ ಚರ್ಚೆ ಮಾಡಿದರೆ ಮಾತ್ರ ಇರುವ ಸಮಸ್ಯೆಗಳನ್ನು ಇತ್ಯರ್ಥ ಮಾಡಿಕೊಳ್ಳಲು ಸಾಧ್ಯವಾಗುತ್ತದೆ. ಈ ಸಂಬಂಧ ಸಫಾಯಿ ಕರ್ಮಚಾರಿಗಳು ಹಾಗೂ ಪೌರಕಾರ್ಮಿಕರ ಸಮಸ್ಯೆಗಳು ಇತ್ಯರ್ಥ ಮಾಡುವ ಬಗ್ಗೆ ಪಾಲಿಕೆ ಆಯುಕ್ತರು, ಬಿಡಿಎ ಆಯುಕ್ತರು, ಘನತ್ಯಾಜ್ಯ ವಿಭಾಗದ ಅಧಿಕಾರಿಗಳ ಜೊತೆ ಚರ್ಚೆ ನಡೆಸಿ ಸಮಸೆಗಳನ್ನು ಬಗೆಹರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಾದ ಶ್ರೀ ಜಗದೀಶ್ ಹಿರೇಮನಿ ರವರು ಮಾತನಾಡಿ,** ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮಕ್ಕೆ 120 ಕೋಟಿ ರೂ. ಜಮಾ ಆಗಿದ್ದು, ಎಲ್ಲಾ ಸಫಾಯಿ ಕರ್ಮಚಾರಿಗಳು ನಿಗಮಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಸಾಲ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಕಸ ವಿಲೇವಾರಿ ಮಾಡುವ ಆಟೋ ಟಿಪ್ಪರ್ ಚಾಲಕ ಹಾಗೂ ಹೆಲ್ಪರ್‌ಗಳನ್ನು ಕೂಡಾ ಪೌರಕಾರ್ಮಿಕರನ್ನಾಗಿ ಪರಿಗಣಿಸಿ ನೇಮಕಾ ಮಾಡಿಕೊಳ್ಳಲು ಮುಂದಾಗಬೇಕು. ಜೊತೆಗೆ ಪೌರಕಾರ್ಮಿಕರಿಗೆ ಸಿಗುತ್ತಿರುವ ಎಲ್ಲಾ ಸೌಲಭ್ಯಗಳು ಅವರಿಗೂ ಸಿಗುವಂತಾಗಬೇಕು. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಘನತ್ಯಾಜ್ಯ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕ ಶೌಚಾಲಯಗಳನ್ನು ಇಂದೋರ್ ಮಾದರಿಯಲ್ಲಿ ನಿರ್ಮಿಸಲಾಗುವುದು ಎಂದು ಮಹಾಪೌರರು ತಿಳಿಸಿದ್ದಾರೆ. ಈ ಪೈಕಿ ಸಾರ್ವಜನಿಕ ಶೌಚಾಲಯಗಳ ನಿರ್ವಹಣೆಯನ್ನು ಹೊರರಾಜ್ಯದವರಿಗೆ ನೀಡದೆ ಸಫಾಯಿ ಕರ್ಮಚಾರಿ ಹಾಗೂ ಪೌರಕಾರ್ಮಿಕರ ಅವಲಂಬಿತರಿಗೆ ನೀಡಬೇಕು ಎಂದರು.

**ಘನತ್ಯಾಜ್ಯ ವಿಭಾಗದ ಜಂಟಿ ಆಯುಕ್ತರಾದ ಸರ್ಫರಾಜ್ ಖಾನ್ ಮಾತನಾಡಿ,** ಪಾಲಿಕೆ ವ್ಯಾಪ್ತಿಯಲ್ಲಿ 700 ಜನಕ್ಕೆ ಒಬ್ಬ ಪೌರಕಾರ್ಮಿಕರಂತೆ ಒಟ್ಟು 18,000 ಪೌರಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ. ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರು 500 ಜನಕ್ಕೆ ಒಬ್ಬ ಪೌರಕಾರ್ಮಿಕರನ್ನು ನಿಯೋಜನೆ ಮಾಡುವಂತೆ ಸೂಚನೆ ನೀಡಿದ್ದರು. ಈ ಬಗ್ಗೆ ಆಯುಕ್ತರ ಗಮನಕ್ಕೆ ತಂದು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಹೆಚ್ಚುವರಿಯಾಗಿ 3,000 ಪೌರಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದ ಹಿರಿಯರು ಹಾಗೂ ಹೆಚ್ಚು ವರ್ಷ ಕಾರ್ಯನಿರ್ವಹಿಸಿದ ಪೌರಕಾರ್ಮಿಕರ ದಾಖಲೆಗಳನ್ನು ಪರಿಗಣಿಸಿ 3,000 ಪೌರಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದರು.

ಎಲ್ಲಾ ಪೌರಕಾರ್ಮಿಕರಿಗೆ ಸಕಾಲದಲ್ಲಿ ವೇತನ ಪಾವತಿ ಮಾಡಲಾಗುತ್ತಿದೆ. ಖಾಯಂ ಹಾಗೂ ನೇರ ವೇತನ ಪಾವತಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ನಿಧನರಾದಲ್ಲಿ ಶವಸಂಸ್ಕಾರಕ್ಕೆ 25 ಸಾವಿರ ರೂ. ಸಹಾಯಧನ, 10 ಲಕ್ಷ ರೂ. ಪರಿಹಾರ ನೀಡಲಾಗುವುದು. ಅಪಘಾತವಾದಲ್ಲಿ 5 ಲಕ್ಷ ರೂ. ನೀಡಲಾಗುತ್ತಿದೆ ಎಂದರು.

ನೇರ ವೇತನ ಪಾವತಿ ಪೌರಕಾರ್ಮಿಕರಿಗೆ 60 ವರ್ಷವಾದರೆ ಅವರನ್ನು ನಿವೃತ್ತಿಗೊಳಿಸಲಾಗುತ್ತದೆ. ಅವರು ತೆರವಾದ ಜಾಗಕ್ಕೆ ಅವರ ಕುಟುಂಬದ ಸದಸ್ಯರನ್ನು ನಿಯೋಜನೆ ಮಾಡಿಕೊಳ್ಳಬಹುದು. ಒಂದು ವೇಳೆ ಅವರ ಕುಟುಂಬದಲ್ಲಿ ಅರ್ಹ ಸದಸ್ಯರಿಲ್ಲದಿದ್ದರೆ 10 ಲಕ್ಷ ರೂ.ಗಳ ಒಂದು ಬಾರಿಯ ಹಿಡಗಂಟು(ಲಂಪ್ಸಮ್) ಮೊತ್ತವನ್ನು ವಯೋನಿವೃತ್ತ ನೇರ ಸಂಭಾವನೆ ಪದ್ಧತಿಯಲ್ಲಿ ಕಾರ್ಯನಿರ್ವಹಿಸಿದ ಪೌರಕಾರ್ಮಿಕರ ಹಾಗೂ ಪಾಲಿಕೆ ಆಯುಕ್ತರ ಜಂಟಿ ಖಾತೆಯಲ್ಲಿ ಠೇವಣಿಯನ್ನಿಟ್ಟು, ಆ ಠೇವಣಿಯಿಂದ ಲಭ್ಯವಾಗುವ ಬಡ್ಡಿ ಮೊತ್ತವನ್ನು ಮಾಹೆಯಾನ ಪಿಂಚಣಿ ಮೊತ್ತದಲ್ಲಿ ಪರಿಹಾರವಾಗಿ ನೀಡಲಾಗುವುದು ಎಂದರು.

ಪೌರಕಾರ್ಮಿಕರಿಗೆ ಪೊರಕೆ ಖರೀದಿಸಲು ಹಾಗೂ ಊಟ ಮಾಡಲು ತಗಲುವ ಮೊತ್ತವನ್ನು ಅವರ ಖಾತೆಗೆ ಜಮಾ ಮಾಡಲು ಕ್ರಮ ವಹಿಸಲಾಗುತ್ತಿದೆ. ಅಲ್ಲದೆ ಆರೋಗ್ಯ ಶಿಬಿರ, ಹೆಲ್ತ್ ಕಾರ್ಡ್, ಸುರಕ್ಷಾ ಪರಿಕರಗಳನ್ನು ಕೂಡಾ ಕಾಲ ಕಾಲಕ್ಕೆ ನೀಡಲಾಗುವುದು. ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ 1,100 ಪೌರಕಾರ್ಮಿಕರನ್ನು ಖಾಯಂ ಮಾಡಿಕೊಳ್ಳುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**